+96

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಯ ಉತ್ತರ.**

*********

**ಪ್ರಶ್ನೆ:-**

ಕರ್ನಾಟಕ ರಾಜ್ಯದಲ್ಲಿ " ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ(KREIS) ನಡೆಸುವ ಎಲ್ಲಾ ವಸತಿ ಶಾಲೆಗಳು ಮತ್ತು ಕಾಲೇಜುಗಳಿಗೆ ಯುನಿಫಾರಂ ಮತ್ತು ಸ್ಟೇಷನರಿಗಳನ್ನು ವಿತರಿಸಿಲ್ಲ ಎಂಬ ವಿಷಯವನ್ನು ಮಾನ್ಯ ಹಿಂದುಳಿದ ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಹೇಳಿಕೆ:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ 833 ವಸತಿ ಶಾಲೆ/ಕಾಲೇಜುಗಳು (503-ಪ.ಜಾತಿ 156 ಪ.ವರ್ಗ ಮತ್ತು 174 ಹಿಂ.ವರ್ಗ) ಕಾರ್ಯನಿರ್ವಹಿಸುತ್ತಿವೆ. ಸದರಿ ವಸತಿ ಶಾಲೆ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ 6 ರಿಂದ 12ನೇ ತರಗತಿಯ 216090 ವಿದ್ಯಾರ್ಥಿಗಳಿಗೆ 2023-24 ನೇ ಸಾಲಿಗೆ ಸಮವಸ್ತ್ರವನ್ನು ಸರಬರಾಜು ಮಾಡಲು ಕರ್ನಾಟಕ ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ರವರಿಗೆ ದಿ: 28.03.2023 ರಂದು ಕಾರ್ಯದೇಶ ನೀಡಲಾಗಿದ್ದು, ಸರಬರಾಜು ಪ್ರಕ್ರಿಯೆ ಜಾರಿಯಲ್ಲಿದ್ದು, ತ್ವರಿತವಾಗಿ ಪೂರ್ಣಗೊಳಿಸಲು ಎಲ್ಲಾ ಅಗತ್ಯಕ್ರಮ ಕೈಗೊಳ್ಳಲಾಗುತ್ತಿದೆ.

2023-24ನೇ ಶೈಕ್ಷಣಿಕ ಸಾಲಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿನ 6 ರಿಂದ 12ನೇ ತರಗತಿಯ 216090 ವಿದ್ಯಾರ್ಥಿಗಳಿಗೆ ಲೇಖನಾ ಸಾಮಗ್ರಿಗಳನ್ನು ಸರಬರಾಜು ಮಾಡಲು ಮೇ|| ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ ಲಿಮಿಟೆಡ್, ಬೆಂಗಳೂರು ರವರಿಗೆ ದಿ: 15.05.2023 ರಂದು ಕಾರ್ಯದೇಶ ನೀಡಲಾಗಿದ್ದು, ಸರಬರಾಜು ಪ್ರಕ್ರಿಯೆ ಜಾರಿಯಲ್ಲಿದ್ದು, ತ್ವರಿತವಾಗಿ ಪೂರ್ಣಗೊಳಿಸಲು ಎಲ್ಲಾ ಅಗತ್ಯಕ್ರಮ ಕೈಗೊಳ್ಳಲಾಗುತ್ತಿದೆ.

**ಸಂಖ್ಯೆ:**ಹಿಂವಕ 352 ಬಿಎಂಎಸ್ 2023

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಸಚಿವರು